# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| 1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 856(981) |
| 2. ಮಾನ್ಯ ಸದಸ್ಯರ ಹೆಸರು | ಶ್ರೀ ಐವನ್ ಡಿಸೋಜಾ (ನಾಮನಿರ್ದೇಶನ ಹೊಂದಿದವರು) |
| 3. ಉತ್ತರಿಸಬೇಕಾದ ದಿನಾಂಕ | 19/12/2018 |
| 4. ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಸಂಘಟಿತ ಕಾರ್ಮಿಕರಿಗೆ ಜಾರಿಗೆ ತಂದಿರುವ ಪಿಂಚಣಿ ಯೋಜನೆ ಜಾರಿಯಲ್ಲಿದೆಯೇ; ಅಸಂಘಟಿತ ಸಾರಿಗೆ ನೌಕರರಿಗೆ ಈ ಯೋಜನೆ ಅನ್ವಯಿಸುವುದಿಲ್ಲವೇ; ಪಿಂಚಣಿ ಯೋಜನೆ ಅನ್ವಯ ನೋಂದಾಯಿತ ಕಾರ್ಮಿಕರ ಸಂಖ್ಯೆ ಎಷ್ಟು; (ವಿವರ ನೀಡುವುದು) | ಕಾರ್ಮಿಕ ಇಲಾಖೆಯಲ್ಲಿ ಅಸಂಘಟಿತ ಕಾರ್ಮಿಕರಿಗೆ ಯಾವುದೇ ಪಿಂಚಣಿ ಯೋಜನೆ ಇರುವುದಿಲ್ಲ. ಆದರೆ, ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ಮಂಡಳಿಗಳಾದ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಮತ್ತು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ವತಿಯಿಂದ ಪಿಂಚಣಿ ಸೌಲಭ್ಯಗಳನ್ನು ನೀಡಲಾಗುತ್ತಿದ್ದು, ವಿವರ ಕೆಳಕಂಡಂತಿದೆ.<br><br><u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u> ಈ ಮಂಡಳಿಯಲ್ಲಿ ನೋಂದಾಯಿತರಾಗಿರುವ ಫಲಾನುಭವಿಗಳು 60 ವರ್ಷ ವಯಸ್ಸು ಪೂರ್ಣಗೊಂಡಿರುವವರಿಗೆ ಮಾಸಿಕ ರೂ. 1000/- ಪಿಂಚಣಿ ನೀಡುವ ಸೌಲಭ್ಯ ಜಾರಿಯಲ್ಲಿರುತ್ತದೆ. ಇದುವರೆಗೂ ಮಂಡಳಿಯಿಂದ 1119 ಅರ್ಹ ಫಲಾನುಭವಿಗಳಿಗೆ ಪಿಂಚಣಿ ಸೌಲಭ್ಯ ನೀಡಲಾಗುತ್ತಿದೆ. ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳ ಜಿಲ್ಲಾವಾರು ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಿದೆ.<br><br><u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ :</u> ಈ ಮಂಡಳಿಯಿಂದ ನೋಂದಾಯಿತ ಅಸಂಘಟಿತ ಕಾರ್ಮಿಕರಿಗೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ. ಯೋಜನೆಗಳ ವಿವರ ಈ ಕೆಳಕಂಡಂತಿದೆ.<br>• ಕೇಂದ್ರ ಸರ್ಕಾರದ ಎನ್.ಪಿ.ಎಸ್-ಲೈಟ್ ಸ್ವಾವಲಂಭನ್ ಪಿಂಚಣಿ ಯೋಜನೆಯನ್ನು ಅಸಂಘಟಿತ ಕಾರ್ಮಿಕರಿಗಾಗಿ ರಾಜ್ಯ ಸರ್ಕಾರವು ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ 2010-11ನೇ ಸಾಲಿನಿಂದ ಜಾರಿಗೊಳಿಸುತ್ತಿತ್ತು. ಕೇಂದ್ರ ಸರ್ಕಾರವು 'ಅಟಲ್ ಪಿಂಚಣಿ ಯೋಜನೆ'ಯನ್ನು ಜಾರಿಗೆ ತಂದ ನಂತರ ಪಿಂಚಣಿ ನಿಧಿ ನಿಯಂತ್ರಣ ಅಭಿವೃದ್ಧಿ ಪ್ರಾಧಿಕಾರ (ಪಿ.ಎಫ್.ಆರ್.ಡಿ.ಎ.)ವು ನೀಡಿದ ಸೂಚನೆಯನ್ವಯ ದಿನಾಂಕ:01.04.2015 ರಿಂದ ಅನ್ವಯವಾಗುವಂತೆ, ಎನ್.ಪಿ.ಎಸ್-ಲೈಟ್ ಸ್ವಾವಲಂಭನ್ ಯೋಜನೆಯಡಿ ಹೊಸ ನೋಂದಣಿಯನ್ನು ಸ್ಥಗಿತಗೊಳಿಸಲಾಗಿದೆ. ಪ್ರಸ್ತುತ ನೋಂದಾಯಿತ ಫಲಾನುಭವಿಗಳು 60 ವರ್ಷ ಪೂರೈಸಿದಲ್ಲಿ ಅಥವಾ ನಿಧನರಾದಲ್ಲಿ ನಿರ್ಗಮನ ಪ್ರಕರಣಗಳನ್ನು ಮಾತ್ರ ಮಂಡಳಿಯು ನಿರ್ವಹಿಸುತ್ತಿದೆ.<br>• ಎನ್.ಪಿ.ಎಸ್-ಲೈಟ್ ಸ್ವಾವಲಂಭನ್ ಯೋಜನೆ ಪ್ರಾರಂಭವಾದಾಗಿನಿಂದ ಅಂದರೆ 2010-11 ರಿಂದ 31.03.2015 ರವರಗೆ ಒಟ್ಟು 50,666 ಫಲಾನುಭವಿಗಳನ್ನು ನೋಂದಾಯಿಸಲಾಗಿದೆ. ಫಲಾನುಭವಿಗಳ ಜಿಲ್ಲಾವಾರು ವಿವರವನ್ನು ಅನುಬಂಧ-2 ರಲ್ಲಿ ಒದಗಿಸಿದೆ.<br>• ಎನ್.ಪಿ.ಎಸ್-ಲೈಟ್ ಸ್ವಾವಲಂಭನ್ ಪಿಂಚಣಿ ಯೋಜನೆಯನ್ನು ಕೇಂದ್ರ ಸರ್ಕಾರವು ದಿನಾಂಕ: 01.04.2015 ರಿಂದ ಸ್ಥಗಿತಗೊಳಿಸಿದ ನಂತರ ಕರ್ನಾಟಕ ರಾಜ್ಯ ಸರ್ಕಾರವು 2017-18ನೇ ಸಾಲಿನಲ್ಲಿ 5 ಅಸಂಘಟಿತ ವಲಯದ ಕಾರ್ಮಿಕರಾದ ಹಮಾಲರು, ಮನೆಗೆಲಸದವರು, ಟೈಲರ್ಸ್, ಮೆಕ್ಯಾನಿಕ್ ಹಾಗೂ |

| | | |
|---|---|---|
| | | ಚಿಂದಿ ಆಯುವವರಿಗೆ ಹಾಗೂ 2018-19ನೇ ಸಾಲಿನಲ್ಲಿ 6 ಅಸಂಘಟಿತ ವಲಯದ ಕಾರ್ಮಿಕರಾದ ಅಕ್ಕಸಾಲಿಗರು, ಕುಂಬಾರರು, ಕಮ್ಮಾರರು, ಕ್ಷೌರಿಕರು, ಅಗಸರು ಹಾಗೂ ಭಟ್ಟಿ ಕಾರ್ಮಿಕರಿಗಾಗಿ ವಂತಿಕೆ ಆಧಾರಿತ ಭವಿಷ್ಯ ನಿಧಿ ಯೋಜನೆಯನ್ನು ಜಾರಿಗೆ ತಂದು ಅನುಷ್ಠಾನಗೊಳಿಸಲು ತೀರ್ಮಾನಿಸಲಾಗಿತ್ತು. ಅದರಂತೆ, ಯೋಜನೆಯ ರೂಪುರೇಷಗಳನ್ನು ಸಿದ್ಧಪಡಿಸಲಾಗುತ್ತಿದ್ದು, ಶೀಘ್ರವೇ ಈ ಯೋಜನೆಯನ್ನು ಜಾರಿಗೊಳಿಸಲಾಗುವುದು. |
| ಆ) | ಅಸಂಘಟಿತ ಕಾರ್ಮಿಕರಿಗೆ ರಾಜ್ಯದಲ್ಲಿ ಜಾರಿಯಲ್ಲಿರುವ ಸಾಮಾಜಿಕ ಕಾರ್ಯಕ್ರಮಗಳು ಯಾವುವು; ನೋಂದಾಯಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ಒದಗಿಸುವುದು) ಕಾರ್ಮಿಕರು ನೀಡಬೇಕಾದ ವಂತಿಗೆ ಎಷ್ಟು; (ವಿವರ ನೀಡುವುದು) | <u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u> ಈ ಮಂಡಳಿಯು ಅಸಂಘಟಿತ ವಲಯಕ್ಕೆ ಸೇರಿದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ 15 ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಅವುಗಳ ವಿವರಗಳನ್ನು ಅನುಬಂಧ -3ರಲ್ಲಿ ಒದಗಿಸಿದೆ.<br><br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಗುರುತಿಸಿ ಅವರನ್ನು ಮಂಡಳಿಯಲ್ಲಿ ನೋಂದಾಯಿಸುವ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿದೆ. ಅಲ್ಲದೆ ಕಟ್ಟಡ ಕಾಮಗಾರಿಗಳ ಸ್ಥಳಕ್ಕೆ ಭೇಟಿ ನೀಡಿ ರಾಜ್ಯದ ಎಲ್ಲಾ ಹಿರಿಯ/ಕಾರ್ಮಿಕ ನಿರೀಕ್ಷಕರುಗಳು ಆನ್-ಲೈನ್ ಮುಖೇನ ಕಾರ್ಮಿಕರನ್ನು ನೋಂದಣಿ ಮಾಡುತ್ತಿದ್ದಾರೆ.<br><br>ಮುಂದುವರೆದು, ಗ್ರಾಮೀಣ ಪ್ರದೇಶದಲ್ಲಿ ಕಟ್ಟಡ ಅಥವಾ ಇತರೆ ನಿರ್ಮಾಣ ಕೆಲಸಗಳನ್ನು ನಿರ್ವಹಿಸುವ ಕಾರ್ಮಿಕರುಗಳನ್ನು ಮಂಡಳಿಯ ಫಲಾನುಭವಿಗಳನ್ನಾಗಿ ನೋಂದಾಯಿಸುವ ವಿಶೇಷ ನೋಂದಣಿ ಅಭಿಯಾನವನ್ನು ಮೆ॥ ಕಿಯೋನಿಕ್ಸ್ ಸಂಸ್ಥೆಗೆ ವಹಿಸಲಾಗಿರುತ್ತದೆ. ಇವರು ರಾಜ್ಯದಾದ್ಯಂತ ವಿವಿಧ ಇಲಾಖೆಗಳ ಅಧಿಕಾರಿಗಳ ಸಹಯೊಗದೊಂದಿಗೆ ಕಾರ್ಮಿಕರನ್ನು ನೋಂದಣಿ ಮಾಡಿ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸುವ ಕ್ರಮ ವಹಿಸಿರುತ್ತಾರೆ.<br><br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಫಲಾನುಭವಿಗಳಾಗಿ ನೋಂದಾಯಿಸಿಕೊಳ್ಳಲು ರೂ.25/- ಗಳ ನೋಂದಣಿ ಶುಲ್ಕ ಮತ್ತು ಸದಸ್ಯತ್ವವನ್ನು ಮುಂದುವರೆಸಲು ಪ್ರತಿ ವರ್ಷಕ್ಕೆ ರೂ.25/- ರಂತೆ ವಂತಿಕೆ ಪಾವತಿಸಬೇಕಿರುತ್ತದೆ.<br><br><u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u> ಈ ಮಂಡಳಿಯು ಅಸಂಘಟಿತ ವಲಯದ ಕಾರ್ಮಿಕರಿಗೆ ಈ ಕೆಳಕಂಡ <u>ಸಾಮಾಜಿಕ ಭದ್ರತಾ ಯೋಜನೆ</u>ಗಳನ್ನು ಅನುಷ್ಠಾನಗೊಳಿಸುತ್ತಿದೆ.<br><br>1. <u>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ</u> :- ಈ ಯೋಜನೆಯಡಿ ಅಸಂಘಟಿತ ವಲಯದ ಕಾರ್ಮಿಕರೆಂದು ಗುರುತಿಸಲ್ಪಟ್ಟ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಅಪಘಾತ ಪರಿಹಾರ ಸೌಲಭ್ಯ ಒದಗಿಸುವ ಯೋಜನೆಯನ್ನು ಜಾರಿಗೊಳಿಸುತ್ತಿದೆ. ಈ ಯೋಜನೆಯಡಿ ದೊರಕುವ ಸೌಲಭ್ಯಗಳು ಈ ಕೆಳಗಿನಂತಿವೆ:-<br><br>• ಅಪಘಾತದಿಂದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳು ಮರಣ ಹೊಂದಿದಲ್ಲಿ, ಅವರ ನಾಮನಿರ್ದೇಶಿತರಿಗೆ ರೂ.5.00 ಲಕ್ಷ ಪರಿಹಾರ.<br><br>• ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಾಗ, ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ರೂ.2.00 ಲಕ್ಷದ ವರೆಗೆ ಪರಿಹಾರ.<br><br>• ಅಪಘಾತದಿಂದ ತಾತ್ಕಾಲಿಕ ದುರ್ಬಲತೆ ಹೊಂದಿದಾಗ, ಫಲಾನುಭವಿಗೆ ಗರಿಷ್ಠ ರೂ.1.00 ಲಕ್ಷ ರೂ.ಗಳವರೆಗೆ ವೈದ್ಯಕೀಯ |

ವೆಚ್ಚದ ಮರುಪಾವತಿ.

- ಈ ಸೌಲಭ್ಯವು ಫಲಾನುಭವಿಯು ಕರ್ತವ್ಯದಲ್ಲಿರುವಾಗ ಹಾಗೂ ಇಲ್ಲದಿರುವಾಗಲೂ ಅಪಘಾತಗೊಂಡಲ್ಲಿ ಪರಿಹಾರ ಲಭ್ಯವಾಗುತ್ತದೆ.

<u>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ನೋಂದಣಿ ಮಾಡುವ ವಿಧಾನ:</u>

- ಕರ್ನಾಟಕ ರಾಜ್ಯದ ಸಾರಿಗೆ ಇಲಾಖೆಯಿಂದ ಊರ್ಜಿತ ವಾಣಿಜ್ಯ ವಾಹನ ಚಾಲನಾ ಪರವಾನಗಿ ಪಡೆದ ಎಲ್ಲಾ ಚಾಲಕರು ಈ ಯೋಜನೆಯ ವ್ಯಾಪ್ತಿಗೆ ಒಳಪಡುತ್ತಾರೆ. ಚಾಲಕರು ಈ ಯೋಜನೆಯಡಿ ಪ್ರತ್ಯೇಕವಾಗಿ ನೋಂದಣಿ ಮಾಡಿಸಿಕೊಳ್ಳುವ ಅವಶ್ಯಕತೆ ಇರುವುದಿಲ್ಲ.
- ನಿರ್ವಾಹಕರು ಹಾಗೂ ಕ್ಲೀನರ್‌ಗಳು ಈ ಯೋಜನೆಯಡಿ ನೋಂದಣಾಧಿಕಾರಿಗಳ ಬಳಿ ನೋಂದಾಯಿಸಿಕೊಳ್ಳಬೇಕಾಗಿರುತ್ತದೆ. ನೋಂದಾಣಾಧಿಕಾರಿಗಳನ್ನು ಶೀಘ್ರವೇ ನೇಮಕ ಮಾಡಲು ಕ್ರಮಕೈಗೊಳ್ಳಲಾಗುತ್ತಿದೆ.

2. <u>ಅಪಘಾತ ಜೀವ ರಕ್ಷಕ ಯೋಜನೆ:-</u> 2016-17ನೇ ಸಾಲಿನಿಂದ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯ ಫಲಾನುಭವಿಗಳಾದ ಖಾಸಗಿ ವಾಣಿಜ್ಯ ಸಾರಿಗೆ ಚಾಲಕರಿಗೆ ಪ್ರಥಮ ಚಿಕಿತ್ಸಾ ತರಬೇತಿ ನೀಡಿ, ಅಪಘಾತಕ್ಕೊಳಗಾಗಿ ಗಾಯಗೊಂಡವರನ್ನು ಪ್ರಾಣಾಪಾಯದಿಂದ ರಕ್ಷಿಸುವ "ಅಪಘಾತ ಜೀವ ರಕ್ಷಕ" ಸ್ವಯಂ ಸೇವಕರನ್ನು ಸಜ್ಜುಗೊಳಿಸುವ ಯೋಜನೆಯನ್ನು ಜಾರಿಗೊಳಿಸುತ್ತಿದೆ.

ಈ ಯೋಜನೆಯಡಿ ತರಬೇತಿ ಪಡೆದ ಫಲಾನುಭವಿಗಳಿಗೆ ಸುಸಜ್ಜಿತ ಪ್ರಥಮ ಚಿಕಿತ್ಸಾ ಕಿಟ್ ಹಾಗೂ ತರಬೇತಿ ಪ್ರಮಾಣ ಪತ್ರ ನೀಡಲಾಗುತ್ತಿದೆ.

ಪ್ರಥಮ ಚಿಕಿತ್ಸೆ ತರಬೇತಿ ಪಡೆದ ಚಾಲಕರು ಅಪಘಾತಕ್ಕೊಳಗಾದ ಗಾಯಾಳುವಿಗೆ ಪ್ರಥಮ ಚಿಕಿತ್ಸೆ ನೀಡಿ, ಹತ್ತಿರದ ಆಸ್ಪತ್ರೆಗೆ ದಾಖಲು ಮಾಡಿ, ಪೊಲೀಸ್ ಠಾಣೆಗೆ ಮಾಹಿತಿ ನೀಡಿರುವ ದಾಖಲೆಗಳನ್ನು ಮಂಡಳಿಗೆ ಸಲ್ಲಿಸಿದಲ್ಲಿ ಅಂತಹ ಜೀವರಕ್ಷಕರಿಗೆ ರೂ.1000/-ಗಳ ಪ್ರೋತ್ಸಾಹ ಧನ ನೀಡಲಾಗುವುದು.

3 <u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-</u> 2017-18ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವ ಅಸಂಘಟಿತ ವಲಯಕ್ಕೆ ಸೇರಿದ 05 ವಲಯಗಳ ಕಾರ್ಮಿಕರಾದ ಚಿಂದಿ ಆಯುವವರು, ಗೃಹ ಕಾರ್ಮಿಕರು, ಹಮಾಲಿಗಳು, ಟೈಲರ್‌ಗಳು ಹಾಗೂ ಮೆಕ್ಯಾನಿಕ್ ವರ್ಗದ ಕಾರ್ಮಿಕರನ್ನು ನೊಂದಾಯಿಸಿ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ.

2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಅಸಂಘಟಿತ ವಲಯಕ್ಕೆ ಸೇರಿದ ಕಾರ್ಮಿಕರಾದ ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಮಂಡಕ್ಕಿಭಟ್ಟಿ ಕಾರ್ಮಿಕರು ಹಾಗೂ ಕ್ಷೌರಿಕರಿಗೆ ಸ್ಮಾರ್ಟ್‌ಕಾರ್ಡ್ ನೀಡಲು ಕ್ರಮಕೈಗೊಳ್ಳಲಾಗುತ್ತಿದೆ.

ನೋಂದಣಿಯಾಗಿ ಸ್ಮಾರ್ಟ್‌ಕಾರ್ಡ್ ಪಡೆಯಲು ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ, 2008 ರನ್ವಯ ಸ್ವಯಂಘೋಷಣಾ ಪ್ರಮಾಣ ಪತ್ರವನ್ನು ಸಲ್ಲಿಸಬೇಕಾಗಿರುತ್ತದೆ. ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ (ಕರ್ನಾಟಕ) ನಿಯಮಗಳು 2009ರ ನಿಯಮ 12(1)(ii)ರನ್ವಯ ಕಾರ್ಮಿಕರು ರೂ.25/- ಗಳ ನೋಂದಣಿ ಶುಲ್ಕವನ್ನು ಪಾವತಿಸಬೇಕಾಗಿರುತ್ತದೆ.

| | | |
|---|---|---|
| ಇ) | ಅಸಂಘಟಿತ ಖಾಸಗಿ ಸಾರಿಗೆ ಕಾರ್ಮಿಕರಿಗೆ ಮನೆ–ನಿವೇಶನ ನೀಡಲು ಇಲಾಖೆ ಕ್ರಮ ಕೈಗೊಂಡಿದೆಯೇ; | ಅಸಂಘಟಿತ ಖಾಸಗಿ ಸಾರಿಗೆ ಕಾರ್ಮಿಕರಿಗೆ ಮನೆ–ನಿವೇಶನ ನೀಡುವ ಯಾವುದೇ ಪ್ರಸ್ತಾವನೆ ಪ್ರಸ್ತುತ ಇರುವುದಿಲ್ಲ. |
| ಈ) | ಅಸಂಘಟಿತ ಕಾರ್ಮಿಕರ ಹಿತರಕ್ಷಣೆಗಾಗಿ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳದಿರಲು ಕಾರಣವೇನು? (ವಿವರ ನೀಡುವುದು) | ಅಸಂಘಟಿತ ಕಾರ್ಮಿಕರ ಹಿತರಕ್ಷಣೆಗೆ ಸಂಬಂಧಿಸಿದಂತೆ ಮಾಲೀಕ–ಕಾರ್ಮಿಕ ಸಂಬಂಧವಿರುವ ಯಾವುದೇ ಅಸಂಘಟಿತ ಕಾರ್ಮಿಕರು ಇಲಾಖೆಗೆ ದೂರು ನೀಡಿದಲ್ಲಿ ಅನ್ವಯಿಸುವ ಕಾರ್ಮಿಕ ಕಾಯ್ದೆಗಳಡಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: ಕಾಇ 442 ಎಲ್‌ಇಟಿ 2018**

(ವೆಂಕಟರಮಣಪ್ಪ)
ಕಾರ್ಮಿಕ ಸಚಿವರು

ಅನುಬಂಧ-I

## ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಫಲಾನುಭವಿಗಳಿಗೆ ಪಿಂಚಣಿ ಸೌಲಭ್ಯ ಮಂಜೂರಾಗಿರುವ ಜಿಲ್ಲಾವಾರು ವಿವರಗಳು

| ಕ್ರ.ಸಂ. | ಜಿಲ್ಲೆ | ಫಲಾನುಭವಿಗಳ ಸಂಖ್ಯೆ |
|---|---|---|
| 1 | ಬಾಗಲಕೋಟೆ | 36 |
| 2 | ಬೆಳಗಾವಿ | 39 |
| 3 | ಬಳ್ಳಾರಿ | 18 |
| 4 | ಬೆಂಗಳೂರು | 26 |
| 5 | ಬೀದರ್ | 49 |
| 6 | ಬಿಜಾಪುರ | 41 |
| 7 | ಚಾಮರಾಜನಗರ | 24 |
| 8 | ಚಿಕ್ಕಬಳ್ಳಾಪುರ | 5 |
| 9 | ಚಿಕ್ಕಮಗಳೂರು | 18 |
| 10 | ಚಿತ್ರದುರ್ಗ | 14 |
| 11 | ದಾವಣಗೆರೆ | 47 |
| 12 | ಗದಗ | 18 |
| 13 | ಹಾಸನ | 11 |
| 14 | ಹಾವೇರಿ | 11 |
| 15 | ಹುಬ್ಬಳ್ಳಿ | 31 |
| 16 | ಕಲಬುರಗಿ | 45 |
| 17 | ಕಾರವಾರ | 52 |
| 18 | ಕೋಲಾರ | 13 |
| 19 | ಕೊಪ್ಪಳ | 48 |
| 20 | ಮಡಿಕೇರಿ | 5 |
| 21 | ಮಂಡ್ಯ | 54 |
| 22 | ಮಂಗಳೂರು | 160 |
| 23 | ಮೈಸೂರು | 41 |
| 24 | ರಾಯಚೂರು | 8 |
| 25 | ರಾಮನಗರ | 17 |
| 26 | ಶಿವಮೊಗ್ಗ | 52 |
| 27 | ತುಮಕೂರು | 50 |
| 28 | ಉಡುಪಿ | 185 |
| 29 | ಯಾದಗಿರಿ | 1 |
| ಒಟ್ಟು | | **1119** |

ಅನುಬಂಧ-2

ಎನ್ ಪಿ ಎಸ್ ಲೈಟ್ ಸ್ವಾವಲಂಬನ್ ಯೋಜನೆಯಡಿ ನೊಂದಾಯಿತರಾಗಿರುವ ಜಿಲ್ಲಾವಾರು ವಂತಿಕೆದಾರರ ವಿವರಗಳು:

| ಕ್ರ. ಸಂ. | ಜಿಲ್ಲೆಗಳು | ಮಹಿಳೆಯರು | ಪುರುಷರು | ಒಟ್ಟು |
|---|---|---|---|---|
| 1 | ಬಾಗಲಕೋಟೆ | 187 | 720 | 907 |
| 2 | ಬೆಂಗಳೂರು | 3,101 | 5,509 | 8,610 |
| 3 | ಬೆಳಗಾವಿ | 1,805 | 3,706 | 5,511 |
| 4 | ಬಳ್ಳಾರಿ | 556 | 1,238 | 1,794 |
| 5 | ಬೀದರ್ | 71 | 182 | 253 |
| 6 | ಬಿಜಾಪುರ | 224 | 474 | 698 |
| 7 | ಚಾಮರಾಜನಗರ | 98 | 500 | 598 |
| 8 | ಚಿಕ್ಕಬಳ್ಳಾಪುರ | 95 | 722 | 817 |
| 9 | ಚಿಕ್ಕಮಗಳೂರು | 1,016 | 1,009 | 2,025 |
| 10 | ಚಿತ್ರದುರ್ಗ | 1,470 | 388 | 1,858 |
| 11 | ದಕ್ಷಿಣ ಕನ್ನಡ | 2,283 | 4,112 | 6,395 |
| 12 | ದಾವಣಗೆರೆ | 166 | 1,094 | 1,260 |
| 13 | ಧಾರವಾಡ | 817 | 1,702 | 2,519 |
| 14 | ಗದಗ | 267 | 965 | 1,232 |
| 15 | ಗುಲ್ಬರ್ಗ | 117 | 336 | 453 |
| 16 | ಹಾಸನ | 614 | 1,224 | 1,838 |
| 17 | ಹಾವೇರಿ | 55 | 161 | 216 |
| 18 | ಕಾರವಾರ | 7 | 21 | 28 |
| 19 | ಕೊಡಗು | 91 | 153 | 244 |
| 20 | ಕೋಲಾರ | 745 | 972 | 1,717 |
| 21 | ಕೋಪ್ಪಳ | 140 | 236 | 376 |
| 22 | ಮಂಡ್ಯ | 351 | 600 | 951 |
| 23 | ಮೈಸೂರು | 477 | 1,745 | 2,222 |
| 24 | ರಾಯಚೂರು | 167 | 684 | 851 |
| 25 | ರಾಮನಗರ | 288 | 529 | 817 |
| 26 | ಶಿವಮೊಗ್ಗ | 352 | 1,054 | 1,406 |
| 27 | ತುಮಕೂರು | 213 | 580 | 793 |
| 28 | ಉಡುಪಿ | 774 | 2,367 | 3,141 |
| 29 | ಉತ್ತರ ಕನ್ನಡ | 326 | 595 | 921 |
| 30 | ಯಾದಗಿರಿ | 178 | 37 | 215 |
| ಒಟ್ಟು | | **17.051** | **33.615** | **50.666** |

## ಅನುಬಂಧ-03

1. ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.1,000/-
2. ದುರ್ಬಲತೆ ಪಿಂಚಣಿ: ಫಲಾನುಭವಿಗೆ ಖಾಯಿಲೆಗಳಿಂದ ಹಾಗೂ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ ರೂ.1,000/- ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ ರೂ. 2,00,000/-ದವರೆಗೆ ಅನುಗ್ರಹ ರಾಶಿ ಸಹಾಯಧನ.
3. ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.20,000/-ವರೆಗೆ
4. ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-ದವರೆಗೆ ಮುಂಗಡ ಸೌಲಭ್ಯ
5. ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್): ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ ರೂ. 30,000/- ಮತ್ತು ಗಂಡು ಮಗುವಿನ ಜನನಕ್ಕೆ ರೂ.20,000/-
6. ಅಂತ್ಯಕ್ರಿಯೆ ವೆಚ್ಚ : ರೂ.4,000/- ಹಾಗೂ ಎಕ್ಸ್‌ಗ್ರೇಷಿಯಾ ರೂ.50,000/-ಸಹಾಯಧನ
7. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:
   - i) 1, 2 ಹಾಗೂ 3ನೇ ತರಗತಿಯಲ್ಲಿ ಉತ್ತೀರ್ಣರಾದವರಿಗೆ ರೂ. 2,000/-
   - ii) 4, 5 ಹಾಗೂ 6ನೇ ತರಗತಿಯಲ್ಲಿ ಉತ್ತೀರ್ಣರಾದವರಿಗೆ ರೂ. 3,000/-
   - iii) 7 ಹಾಗೂ 8ನೇ ತರಗತಿ ಉತ್ತೀರ್ಣರಾದವರಿಗೆ ರೂ. 4,000/-
   - iv) 9, 10 ನೇ ತರಗತಿ ಹಾಗೂ ಪ್ರಥಮ ಪಿಯುಸಿಉತ್ತೀರ್ಣರಾದವರಿಗೆ 6,000/-
   - v) ದ್ವಿತೀಯ ಪಿ.ಯು.ಸಿ ಉತ್ತೀರ್ಣರಾದವರಿಗೆ ರೂ. 8,000/-
   - vi) ಐಟಿಐ ಮತ್ತು ಡಿಪ್ಲೋಮಾ ಉತ್ತೀರ್ಣರಾದವರಿಗೆ ಪ್ರತಿ ವರ್ಷಕ್ಕೆ ರೂ. 7,000/-
   - vii) ಪದವಿ ಉತ್ತೀರ್ಣರಾದವರಿಗೆ ಪ್ರತಿ ವರ್ಷಕ್ಕೆ ರೂ. 10,000/-
   - viii) ಸ್ನಾತಕೋತ್ತರ ಪದವಿ ಸೇರ್ಪಡೆಗೆ ರೂ. 20,000/- ಹಾಗೂ ಪ್ರತಿ ವರ್ಷ ರೂ.10,000/-ಗಳಂತೆ (ಎರಡು ವರ್ಷಗಳಿಗೆ)
   - ix) ಇಂಜಿನಿಯರಿಂಗ್ ಕೋರ್ಸ್‌ಗೆ ಸೇರ್ಪಡೆಗೆ ರೂ.25,000/- ಹಾಗೂ ಪ್ರತಿ ವರ್ಷ ತೇರ್ಗಡೆಗೆ ರೂ.20,000/-
   - x) ವೈದ್ಯಕೀಯ ಕೋರ್ಸ್‌ಗೆ ಸೇರ್ಪಡೆಗೆ ರೂ.30,000/- ಹಾಗೂ ಪ್ರತಿ ವರ್ಷ ತೇರ್ಗಡೆಗೆ ರೂ.25,000/-
   - xi) ಪಿಹೆಚ್‌ಡಿ ಕೋರ್ಸ್‌ಗೆ ಪ್ರತಿ ವರ್ಷಕ್ಕೆ ರೂ.20,000/- (ಗರಿಷ್ಠ ಎರಡು ವರ್ಷಗಳು) ಮತ್ತು ಪಿಹೆಚ್‌ಡಿ ಪ್ರಬಂಧ ಸ್ವೀಕಾರದ ನಂತರ ಹೆಚ್ಚುವರಿಯಾಗಿ ರೂ.20,000/-

ಪ್ರತಿಭಾವಂತ ಮಕ್ಕಳಿಗಾಗಿ:

- (a) ಎಸ್.ಎಸ್‌ಎಲ್.ಸಿ ಅಥವಾ ತತ್ಸಮಾನ ತರಗತಿಯಲ್ಲಿ ಶೇ.75 ಅಂಕ ಪಡೆದವರಿಗೆ ರೂ.5,000/-
- (b) ಪಿಯುಸಿ ಅಥವಾ ತತ್ಸಮಾನ ತರಗತಿಯಲ್ಲಿ ಶೇ.75 ಅಂಕ ಪಡೆದವರಿಗೆ ರೂ.7,000/-
- (c) ಪದವಿ ಅಥವಾ ತತ್ಸಮಾನ ಕೋರ್ಸ್‌ನಲ್ಲಿ ಶೇ.75 ಅಂಕ ಪಡೆದವರಿಗೆ ರೂ.10,000/-
- (d) ಸ್ನಾತಕೋತ್ತರ ಪದವಿ ಅಥವಾ ತತ್ಸಮಾನ ಕೋರ್ಸ್‌ನಲ್ಲಿ ಶೇ.75 ಅಂಕ ಪಡೆದವರಿಗೆ ರೂ.15,000/-

8. ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ): ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ ರೂ.300/- ರಿಂದ ರೂ.10,000/-ವರೆಗೆ
9. ಅಪಘಾತ ಪರಿಹಾರ: ಮರಣ ಹೊಂದಿದ್ದಲ್ಲಿ ರೂ.5,00,000/-, ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ ರೂ. 2,00,000/- ಮತ್ತು ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ ರೂ.1,00,000/-
10. ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ): ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ

ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಸಾಮಾನ್ಯ ಶಸ್ತ್ರಚಿಕಿತ್ಸೆಗಳಿಗೆ ರೂ.2,00,000/–ವರೆಗೆ

11. ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್): ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ ರೂ.50,000/–

12. LPG ಸಂಪರ್ಕ ಸೌಲಭ್ಯ (ಕಾರ್ಮಿಕ ಅನಿಲ ಭಾಗ್ಯ): ಅನಿಲ ಸಂಪರ್ಕದೊಂದಿಗೆ ಎರಡು ಬರ್ನರ್ ಸ್ಟೌವ್

13. ಬಿಎಂಟಿಸಿ ಬಸ್ ಪಾಸ್ ಸೌಲಭ್ಯ: ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ

14. ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ: ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ

15. ತಾಯಿ ಮಗು ಸಹಾಯ ಹಸ್ತ: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ ರೂ.6,000/–ಗಳ ಸಹಾಯಧನ.